163

## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 523(615) |
| ಮಾನ್ಯ ಸದಸ್ಯರ ಹೆಸರು | : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 20.08.2026 |
| ಉತ್ತರಿಸುವವರು | : ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಎನ್.ಪಿ.ಎಸ್ ಯೋಜನೆಯಡಿ ನಿವೃತ್ತಿಯಾದ ಸರ್ಕಾರಿ ನೌಕರರಿಗೆ ಕನಿಷ್ಠ ಪಿಂಚಣಿಯೂ ಸಿಗದೆ ನಿವೃತ್ತ ನೌಕರರು ಹಾಗೂ ಕುಟುಂಬದವರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಎನ್.ಪಿ.ಎಸ್. ಯೋಜನೆಯಡಿ ನಿವೃತ್ತಿ ಹೊಂದಿದ ನೌಕರರ ಪ್ರಾನ್ ಖಾತೆಯಲ್ಲಿರುವ 60% Lumpsum ಮೊತ್ತವನ್ನು ನೌಕರರು ಹಿಂಪಡೆಯ ಬಹುದಾಗಿದೆ. ಉಳಿದ 40% ಮೊತ್ತವನ್ನು Annuity Service Provider ನಲ್ಲಿ ಹೂಡಿಕೆ ಮಾಡಿ, ಮಾಸಿಕ ಪಿಂಚಣಿಯನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಎನ್.ಪಿ.ಎಸ್ ಯೋಜನೆಯಡಿ ನಿವೃತ್ತರಾಗುವ ಸರ್ಕಾರಿ ನೌಕರರ ಪಿಂಚಣಿಯು ನೌಕರರು ಸಲ್ಲಿಸುವ ಸೇವಾ ಅವಧಿ ಮತ್ತು ಸದರಿ ಅವಧಿಯಲ್ಲಿ ನೌಕರರ ಮೂಲವೇತನದ ಆಧಾರದ ಮೇಲೆ ಪಾವತಿಸಲ್ಪಡುವ ವಂತಿಗೆಯ ಮೇರೆಗೆ ನಿರ್ಧರಿಸಲ್ಪಡುತ್ತದೆ. |
| ಆ) | 2006ಕ್ಕಿಂತ ಮೊದಲು ನೇಮಕಾತಿ ಅಧಿಸೂಚನೆ ಹೊರಡಿಸಿ ದಿನಾಂಕ:01.04.2006ರ ನಂತರ ನೇಮಕಾತಿ ಹೊಂದಿದ ನೌಕರರನ್ನು ಎನ್.ಪಿ.ಎಸ್ ನಿಂದ ಹಳೆಯ ಪಿಂಚಣಿ ಯೋಜನೆಗೆ ಒಳಪಡಿಸಲಾಗಿದ್ದು, ಇನ್ನೂ ಎನ್.ಪಿ.ಎಸ್ ನೌಕರರಿಗೆ ಹಳೆ ಪಿಂಚಣಿ ಜಾರಿ ಮಾಡದಿರಲು ಕಾರಣಗಳೇನು; | ಸರ್ಕಾರದ ಆದೇಶ ಸಂಖ್ಯೆ: ಆಇ-ಪಿಇಎನ್/99/2023, ದಿನಾಂಕ: 24.01.2024ರಲ್ಲಿ, ದಿನಾಂಕ: 01.04.2006ರ ಪೂರ್ವದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ಖಾಲಿ ಹುದ್ದೆಗಳ ಭರ್ತಿಗಾಗಿ ಹೊರಡಿಸಿದ ನೇಮಕಾತಿ ಅಧಿಸೂಚನೆಗಳ ಮೇರೆಗೆ ಆಯ್ಕೆ ಹೊಂದಿ, ದಿನಾಂಕ: 01.04.2006ರಂದು ಅಥವಾ ಆ ದಿನಾಂಕದ ನಂತರ ರಾಜ್ಯ ಸರ್ಕಾರಿ ಸೇವೆಗೆ ಸೇರಿರುವ ಕಾರಣದಿಂದ ನೂತನ ಅಂಶದಾಯಿ ಕೊಡುಗೆ ಯೋಜನೆಯ (ರಾಷ್ಟ್ರೀಯ ಪಿಂಚಣಿ ಯೋಜನೆ) ವ್ಯಾಪ್ತಿಗೊಳಪಟ್ಟಿರುವ ಸರ್ಕಾರಿ ನೌಕರರನ್ನು ಸರ್ಕಾರವು ಅವರ ಅಭಿಮತದ ಮೇರೆಗೆ ಕೆಲವು ಷರತ್ತುಗಳಿಗೊಳಪಟ್ಟು, ಒಂದು ಬಾರಿಯ ಕ್ರಮವಾಗಿ ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ಒಪ್ಪಿಗೆ ನೀಡಿ ಆದೇಶಿಸಲಾಗಿದೆ. ಸದರಿ ಆದೇಶದನ್ವಯ ಅರ್ಹ ನೌಕರರನ್ನು ಹಿಂದಿನ ಡಿಫೈನ್ಡ್ ಪಿಂಚಣಿ ಯೋಜನೆಯ ವ್ಯಾಪ್ತಿಗೊಳಪಡಿಸಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. |
| ಇ) | ಹಳೆ ಪಿಂಚಣಿ ಜಾರಿ ಮಾಡಲು ಸರ್ಕಾರ ರಚಿಸಿರುವ ಸಮಿತಿಯು ಇದುವರೆಗೂ ಅಧ್ಯಯನ ವರದಿ ಸಲ್ಲಿಸದಿರಲು ಕಾರಣಗಳೇನು; (ವಿವರ ನೀಡುವುದು) | ರಾಜ್ಯದಲ್ಲಿ ಜಾರಿಯಲ್ಲಿರುವ ರಾಷ್ಟ್ರೀಯ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ / ಮಾರ್ಪಾಡು ಮಾಡಲು ಸಮಗ್ರವಾಗಿ ಪರಿಶೀಲಿಸಲು ಈಗಾಗಲೇ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 11.12.2018ರ ಮತ್ತು ದಿನಾಂಕ: 01.03.2023 ರ ಸರ್ಕಾರಿ ಆದೇಶಗಳನ್ವಯ ರಚಿಸಲಾಗಿರುವ ಸಮಿತಿಯನ್ನು ದಿನಾಂಕ: 16.08.2024ರಲ್ಲಿ ಪುನರ್ ರಚಿಸಿ ಆದೇಶಿಸಲಾಗಿದ್ದು, ಸಮಿತಿಯು ಹಲವು ಬಾರಿ ಸಭೆಗಳನ್ನು ನಡೆಸಿರುತ್ತದೆ.<br><br>ರಾಷ್ಟ್ರೀಯ ಪಿಂಚಣಿ ಯೋಜನೆಗೆ ಬದಲಾವಣೆ/ಮಾರ್ಪಾಡು ಮಾಡಿರುವ ರಾಜ್ಯಗಳಾದ ಆಂಧ್ರ ಪ್ರದೇಶ ಮತ್ತು ಹಿಮಾಚಲ ಪ್ರದೇಶ ರಾಜ್ಯಗಳಿಗೆ ಅಧಿಕಾರಿಗಳನ್ನೊಳಗೊಂಡ ತಂಡಗಳು ಅಧ್ಯಯನ ನಡೆಸಿ ವರದಿಗಳನ್ನು ಸಮಿತಿಗೆ ಸಲ್ಲಿಸಲಾಗಿದೆ. |
| ಈ) | ಶೀಘ್ರವಾಗಿ ಹಳೆ ಪಿಂಚಣಿ ಯೋಜನೆ ಜಾರಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ, ಮತ್ತು ಇನ್ನೂ ಎಷ್ಟು ಕಾಲಮಿತಿ ಬೇಕಾಗುವುದು? | |

| | | |
|---|---|---|
| | | ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ NPS ಯೋಜನೆಗೆ ಸೂಕ್ತ ಮಾರ್ಪಾಡುಗಳನ್ನು ಮಾಡುವ ಸಾಧ್ಯತೆಗಳ ಕುರಿತು ಮತ್ತು NPS ಯೋಜನೆಯ ಬದಲಾಗಿ ರಾಜ್ಯದಲ್ಲಿ ಏಕೀಕೃತ ಪಿಂಚಣಿ ಯೋಜನೆ (Unified Pension Scheme, UPS) ಅನ್ನು ಜಾರಿ ಮಾಡುವ ಸಾಧ್ಯತೆಗಳು ಮತ್ತು ಇತರೆ ವಿಷಯಗಳ ಕುರಿತು ಸಲಹೆಗಳನ್ನು ನೀಡುವ ಬಗ್ಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಮತ್ತು ಕರ್ನಾಟಕ ರಾಜ್ಯ ಸರ್ಕಾರಿ NPS ನೌಕರರ ಸಂಘ ಇವರುಗಳೊಂದಿಗೆ ಸಮಿತಿಯ ಸಭೆಯಲ್ಲಿ ಚರ್ಚಿಸಲಾಗಿದೆ.<br><br>ಇತ್ತೀಚೆಗೆ ಕೇಂದ್ರ ಸರ್ಕಾರವು ಮಾರ್ಪಡಿಸಿದ ಪಿಂಚಣಿ ಯೋಜನೆಯಾದ Unified Pension Scheme (UPS) ಅನ್ನು ಜಾರಿಗೊಳಿಸಿರುತ್ತಾರೆ. UPS ಅನ್ನು ಜಾರಿಗೊಳಿಸಿದ ನಂತರವೂ ಸಹ NPS ಯೋಜನೆಗೆ ಹಲವು ಮಾರ್ಪಾಡುಗಳನ್ನು ಮಾಡಲಾಗಿರುತ್ತದೆ. ಆದಾಗ್ಯೂ, NPS ಯೋಜನೆಯ ವ್ಯಾಪ್ತಿಗೊಳಪಟ್ಟಿರುವ ಅಧಿಕಾರಿಗಳು/ನೌಕರರುಗಳು NPS ಯೋಜನೆಯಲ್ಲಿಯೇ ಮುಂದುವರೆಯಲು ಅಥವಾ UPS ಯೋಜನೆಗೆ ಬದಲಾಯಿಸಿಕೊಳ್ಳಲು ಆಯ್ಕೆ ನೀಡಲಾಗಿದೆ.<br><br>ಕೇಂದ್ರ ಸರ್ಕಾರವು ಮಾಸಿಕ ಪಿಂಚಣಿ ಆಧಾರಿತ UPS ಯೋಜನೆಯನ್ನು ಅಳವಡಿಸಿಕೊಳ್ಳಲು ಎಲ್ಲಾ ರಾಜ್ಯ ಸರ್ಕಾರಗಳಿಗೆ ಅವಕಾಶ ಕಲ್ಪಿಸಿದ್ದರೂ ಸಹ, ಕೆಲವೇ ರಾಜ್ಯಗಳನ್ನು ಹೊರತುಪಡಿಸಿ ಬಹುತೇಕ ರಾಜ್ಯಗಳು NPS ಯೋಜನೆಯನ್ನೇ ಮುಂದುವರಿಸಿರುತ್ತಾರೆ. ಅಲ್ಲದೇ, ಕೇಂದ್ರ ಸರ್ಕಾರದ ಹೆಚ್ಚಿನ ಅಧಿಕಾರಿಗಳು/ನೌಕರರುಗಳು UPS ಯೋಜನೆಯನ್ನು ಆಯ್ಕೆ ಮಾಡಿಕೊಳ್ಳದೆ NPS ಯೋಜನೆಯಲ್ಲಿಯೇ ಮುಂದುವರೆದಿರುತ್ತಾರೆ.<br><br>ಆದ್ದರಿಂದ, ಪಿಂಚಣಿ ಸಂಬಂಧಿತ ನಿಯಮಗಳಲ್ಲಿ ಹಲವು ಬದಲಾವಣೆಗಳು ಆಗುತ್ತಿವೆ. ಪಿಂಚಣಿ ನಿಯಮಗಳಲ್ಲಿ ಆಗುತ್ತಿರುವ ಈ ಹೊಸ ಬದಲಾವಣೆಗಳ ಪರಿಣಾಮಗಳನ್ನು ಅರ್ಥೈಸಿಕೊಳ್ಳಲು ಹಾಗೂ ಈ ಕುರಿತು ಸಮಗ್ರ ಪರಿಹಾರವನ್ನು ನೀಡಬೇಕಾಗಿರುವುದರಿಂದ, ಸಮಿತಿಯು ಸರ್ಕಾರಕ್ಕೆ ಅಂತಿಮ ವರದಿಯನ್ನು ಸಲ್ಲಿಸಲು ಹೆಚ್ಚಿನ ಸಮಯಾವಕಾಶದ ಅವಶ್ಯಕತೆ ಇರುತ್ತದೆ. |

**ಸಂಖ್ಯೆ:ಅಇ-ಪಿಇಎನ್/190/2026**

(ಡಿ. ಕೆ. ಶಿವಕುಮಾರ್)
ಮುಖ್ಯಮಂತ್ರಿ